# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಾಂತರಾಮ್ ಬುಡ್ನ ಸಿದ್ದಿ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1142** |
| ಉತ್ತರಿಸಬೇಕಾದ ದಿನಾಂಕ | : | 18.12.2024 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಗ್ರಾಮ ಪಂಚಾಯತಿಗಳ ಮೂಲಕ ವಿವಿಧ ವಸತಿ ಯೋಜನೆಗಳಡಿ ಮಂಜೂರಾದ ಮನೆಗಳೆಷ್ಟು; ಇವುಗಳಲ್ಲಿ ಪೂರ್ಣಗೊಂಡ ಮನೆಗಳೆಷ್ಟು; ಈ ಮನೆಗಳು ಪೂರ್ಣಗೊಂಡರೂ ಬಿಲ್ ಪಾವತಿ ಬಾಕಿ ಇರುವ ಮನೆಗಳಷ್ಟು; | 2020-21ನೇ ಸಾಲಿನಿಂದ 2022-23ನೇ ಸಾಲಿನವರೆಗೂ ಉತ್ತರ ಕನ್ನಡ ಜಿಲ್ಲೆಗೆ ವಿವಿಧ ವಸತಿ ಯೋಜನೆಗಳಡಿ ಮಂಜೂರಾದ ಒಟ್ಟು 19,496 ಮನೆಗಳ ಪೈಕಿ 6,059 ಮನೆಗಳು ಪೂರ್ಣಗೊಂಡಿದ್ದು, 8,429 ಮನೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿದ್ದು 4,039 ಮನೆಗಳು ಪ್ರಾರಂಭವಾಗಬೇಕಿರುತ್ತದೆ ಹಾಗೂ 969 ಮನೆಗಳು ನಿಯಮಾನುಸಾರ ರದ್ದಾಗಿರುತ್ತದೆ. |
| ಆ) | ಬಿಲ್ ಪಾವತಿಗೆ ಬಾಕಿ ಇರುವ ಮನೆಗಳ ಬಿಲ್ ಗಳನ್ನು ನೀಡದೆ ಇರಲು ಕಾರಣಗಳೇನು; ಮತ್ತು ಸರ್ಕಾರ ಈ ಬಿಲ್‌ಗಳ ಹಣ ಪಾವತಿಸಲು ತೆಗೆದುಕೊಳ್ಳುವ ಕಾಲಾವಧಿ ಎಷ್ಟು? | ವಿವಿಧ ವಸತಿ ಯೋಜನೆಗಳಡಿ ಫಲಾನುಭವಿಗಳು ನಿರ್ಮಿಸಲಾಗಿರುವ ಮನೆಗಳ ಜಿ. ಪಿ. ಎಸ್ ಆಧಾರಿತ ಭೌತಿಕ ಪ್ರಗತಿಗೆ ಅನುಗುಣವಾಗಿ ಹಂತವಾರು ಸರ್ಕಾರದ ಸಹಾಯಧನವನ್ನು ಬಿಡುಗಡೆ ಮಾಡಲಾಗುತ್ತಿದೆ. ಸರ್ಕಾರದ ಸಹಾಯಧನವನ್ನು ಕಂತುಗಳಲ್ಲಿ ಮನೆಗಳ ಪ್ರಗತಿಗೆ ಅನುಗುಣವಾಗಿ ಫಲಾನುಭವಿಗಳ ಆಧಾರ್ ಆಧಾರಿತ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮೂಲಕ ಅನುದಾನವನ್ನು ಸಕಾಲದಲ್ಲಿ ಬಿಡುಗಡೆ ಮಾಡಲಾಗುತ್ತಿದ್ದು, ಬಸವ ಮತ್ತು ಡಿ.ದೇವರಾಜು ಅರಸು ವಸತಿ ಯೋಜನೆಗಳನ್ನು ಹೊರತುಪಡಿಸಿ, ಅನುದಾನ ಬಿಡುಗಡೆ ಮಾಡಲು ಯಾವುದೇ ಬಾಕಿ ಇರುವುದಿಲ್ಲ.<br><br>ಪ್ರಸ್ತುತ ಬಸವ ವಸತಿ ಮತ್ತು ಡಿ. ದೇವರಾಜು ಅರಸು ವಸತಿ ಯೋಜನೆಯಡಿ ಸರ್ಕಾರಕ್ಕೆ ಹೆಚ್ಚುವರಿ ಅನುದಾನವನ್ನು ಒದಗಿಸುವಂತೆ ಕೋರಿ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. |

ಸಂಖ್ಯೆ: ವಇ 382 ಹೆಚ್‌ಎಂ 2024

(ಬಿ.ಜೆಡ್. ಜಮೀರ್ ಅಹ್ಮದ್‌ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು